Akashvani : Bangalore
Regional Bulletin In Kannada
21.10.2024 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ದೇಶದ ಸರಾಸರಿ ಜಿಎಸ್‌ಡಿಪಿ ಮೀರಿದ ಕರ್ನಾಟಕದ ಆರ್ಥಿಕ ವೃದ್ಧಿ
- ಪೊಲೀಸರ ಮಕ್ಕಳಿಗಾಗಿ ಏಳು ಪಬ್ಲಿಕ್ ಶಾಲೆ ನಿರ್ಮಾಣ- ಮುಖ್ಯಮಂತ್ರಿ ಸಿದ್ದರಾಮಯ್ಯ
- ಮುಡಾ ಪ್ರಕರಣ; ಭೈರತಿ ಸುರೇಶ್ ವಿಚಾರಣೆಯಿಂದ ಸತ್ಯಾಂಶ ಹೊರಬಲಿದೆ- ಶೋಭಾ ಕರಂದ್ಲಾಜೆ
- ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣ; ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿದ ಸಿಬಿಐ
- ರಾಜ್ಯದ ಹಲವೆಡೆ ಧಾರಾಕಾರ ಮಳೆ; ಹಾವೇರಿಯಲ್ಲಿ ಅಪಾರ ಬೆಳೆ ನಷ್ಟ

<><*<><>*><>

ಕರ್ನಾಟಕ ರಾಜ್ಯ ಆರ್ಥಿಕ ಪ್ರಗತಿಯಲ್ಲಿ ದೇಶದಲ್ಲೇ ಉತ್ತಮ ಸಾಧನೆ ಮಾಡಿದ್ದು, ೨೦೨೩-೨೪ ನೇ ಹಣಕಾಸು ಸಾಲಿನಲ್ಲಿ ಶೇಕಡ ೧೦.೨ರಷ್ಟು ಜಿಎಸ್‌ಡಿಪಿ ಪ್ರಗತಿ ಸಾಧಿಸಿದೆ. ಕೇಂದ್ರ ಸಾಂಖ್ಯಿಕ ಮತ್ತು ಯೋಜನಾ ಅನುಷ್ಠಾನ ಸಚಿವಾಲಯದ ಅಂಕಿ ಅಂಶಗಳ ಪ್ರಕಾರ ಈ ಅವಧಿಯಲ್ಲಿ ದೇಶದ ಸರಾಸರಿ ಜಿಎಸ್‌ಡಿಪಿ ಶೇಕಡ ೮.೨ ಆಗಿದೆ. ಕಳೆದ ಬಾರಿ ರಾಜ್ಯ ತೀವ್ರ ಬರಗಾಲಕ್ಕೆ ತುತ್ತಾಗಿದ್ದರೂ, ಜಾಗತಿಕವಾಗಿ ಐಟಿ ಮಾರುಕಟ್ಟೆ ಹಿನ್ನಡೆ ಅನುಭವಿಸಿದ್ದರೂ, ರಾಜ್ಯ ಉತ್ತಮ ಆರ್ಥಿಕ ಪ್ರಗತಿ ಸಾಧಿಸಿದೆ. ಕರ್ನಾಟಕದ ತಲಾ ಜಿಎಸ್‌ಡಿಪಿ ದೇಶದಲ್ಲೇ ಅತ್ಯಧಿಕವಾಗಿದೆ. ರಾಜ್ಯದಲ್ಲಿ ಬರಗಾಲ ಪರಿಸ್ಥಿತಿಯಿಂದಾಗಿ ಕೃಷಿ ವಲಯದ ಅಭಿವೃದ್ದಿ ಉದ್ದೇಶಿತ ಪ್ರಮಾಣದಲ್ಲಿ ಸಾಧ್ಯವಾಗಿರುವುದಿಲ್ಲ. ಭಾರತದ ಐಟಿ ವಲಯ ೨೦೨೨ರ ಹಣಕಾಸು ಸಾಲಿನಲ್ಲಿ ಶೇಕಡ ೧೫.೫ ರಷ್ಟು ಪ್ರಗತಿ ಕಂಡಿದ್ದು, ೨೦೨೩ರ ಅವಧಿಯಲ್ಲಿ ಶೇಕಡ ೮ಕ್ಕೆ ಕುಸಿತ ಅನುಭವಿಸಿದೆ. ಉತ್ತಮ ಆಡಳಿತ ಮತ್ತು ಬಹುವಲಯಗಳ ಅಭಿವೃದ್ಧಿಯಿಂದಾಗಿ ಕರ್ನಾಟಕ ರಾಜ್ಯದ ಆರ್ಥಿಕತೆ ಸ್ಥಿರವಾಗಿರುವುದು ಕಂಡು ಬಂದಿದೆ. ೨೦೨೪-೨೫ನೇ ಹಣಕಾಸು ಸಾಲಿಗೆ ಎನ್‌ಎಸ್ಸಿ ಕರ್ನಾಟಕ ರಾಜ್ಯಕ್ಕೆ ಶೇಕಡ ೯.೪ ಜಿಎಸ್‌ಡಿಪಿ ಪ್ರಗತಿಯನ್ನು ಅಂದಾಜಿಸಿದ್ದು, ಇದು ರಾಷ್ಟ್ರೀಯ ಸರಾಸರಿ ಶೇಕಡ ೧೦.೫ಕ್ಕಿಂತ ಸ್ವಲ್ಪ ಕಡಿಮೆಯಾಗಿದೆ. ಗ್ಯಾರಂಟಿ ಸೇರಿದಂತೆ ರಾಜ್ಯ ಸರ್ಕಾರದ ಹಲವು ಜನಪರ ಯೋಜನೆಗಳು ಅಭಿವೃದ್ಧಿಯ ಫಲ ಎಲ್ಲಾ ವರ್ಗಗಳಿಗೂ ತಲುಪುವುದನ್ನು ಖಾತ್ರಿಪಡಿಸಿವೆ.

<><*<><>*><>

ಪೊಲೀಸರು ಮುಕ್ತವಾಗಿ, ಸ್ವತಂತ್ರವಾಗಿ ಕೆಲಸ ಮಾಡಲು ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಪೊಲೀಸ್ ಸಂಸ್ಮರಣಾ ದಿನದಂದು ಹುತಾತ್ಮ ಪೊಲೀಸ್ ಸಿಬ್ಬಂದಿಗೆ ನಮನ ಸಲ್ಲಿಸಿ ಮಾತನಾಡಿದ ಅವರು ಪೊಲೀಸರ ಮಕ್ಕಳಿಗಾಗಿ  ಪ್ರಮುಖ ಸ್ಥಳಗಳಲ್ಲಿ ೭ ಪಬ್ಲಿಕ್ ಶಾಲೆಗಳನ್ನು ತೆರೆಯಲಾಗುವುದು ಎಂದು ಹೇಳಿದ್ದಾರೆ. ಇದೇ ವೇಳೆ  ೧೦ ಸಾವಿರ ಪೊಲೀಸ್ ವಸತಿ ಮನೆಗಳ ನಿರ್ಮಾಣಕ್ಕೆ ೨ ಸಾವಿರ ಕೋಟಿ ರೂಪಾಯಿ ನೆರವು ಘೋಷಿಸಿದ್ದಾರೆ.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

<><*<><>*><>

ಕರ್ತವ್ಯದ ವೇಳೆ ಜನರ ಸೇವೆಗಾಗಿ ಪ್ರಾಣ ತ್ಯಾಗ ಮಾಡಿದ ಪೊಲೀಸರ ಸೇವೆಯನ್ನು ಸಮಾಜ ಸದಾ ಸ್ಮರಿಸಿಕೊಳ್ಳಬೇಕೆಂದು ದಾವಣಗೆರೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಸುರೇಶ್ ಇಟ್ನಾಳ್ ತಿಳಿಸಿದ್ದಾರೆ.  ಪೊಲೀಸರ ಕಾರ್ಯ ದಕ್ಷತೆ, ಪ್ರಾಮಾಣಿಕತೆ, ಕರ್ತವ್ಯ ಪ್ರಜ್ಞೆ, ಹಾಗೂ ನಿಸ್ವಾರ್ಥ ಸೇವೆಯನ್ನು ಇಂದು ಸ್ಮರಿಸಬೇಕಾಗಿದೆ ಎಂದು ಹಾವೇರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಅಕ್ಷಯ ಶ್ರೀಧರ ಹೇಳಿದ್ದಾರೆ. ಪೊಲೀಸರು ತಮ್ಮ ದೈಹಿಕ ಸಾಮರ್ಥ್ಯದ ಕಡೆಗೆ ಗಮನ ಹರಿಸುವಂತೆ ಸಲಹೆ ನೀಡಿದ್ದಾರೆ. ಆಧುನಿಕ ತಂತ್ರಜ್ಞಾನದಿಂದ ಪೊಲೀಸ್ ಇಲಾಖೆಯು ಹಲವಾರು ಸೈಬರ್ ಕ್ರೈಂ ಪ್ರಕರಣಗಳನ್ನು ಇತ್ಯರ್ಥ ಪಡಿಸಿದೆ ಎಂದು ಧಾರವಾಡ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಹೇಳಿದ್ದಾರೆ. ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ನೆಲೆಸುವಲ್ಲಿ ಪೊಲೀಸ್ ಇಲಾಖೆಯ ಕಾರ್ಯ ಮಹತ್ವಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಕಡತಗಳನ್ನು ಸುಟ್ಟು ಹಾಕಿದ್ದಾರೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪಿಸಿದ್ದಾರೆ.ನವದೆಹಲಿಯಲ್ಲಿ ಮಾತನಾಡಿದ ಅವರು, ಭೈರತಿ ಸುರೇಶ್ ವಿಚಾರಣೆಯಿಂದ ಸತ್ಯ ಹೊರಬರಲಿದೆ. ಸಿದ್ದರಾಮಯ್ಯನವರ ಕುಟುಂಬಕ್ಕೆ ಕಳಂಕ ತಂದವರು ಭೈರತಿ ಸುರೇಶ್ ಎಂದು ಪುನರುಚ್ಚರಿಸಿದ್ದಾರೆ. ಅಭಿವೃದ್ಧಿ ಬಿಟ್ಟು ಕ್ಷುಲ್ಲಕ ರಾಜಕಾರಣ ಮಾಡದಂತೆ ಸಚಿವೆ ಕಿವಿ ಮಾತು ಹೇಳಿದ್ದಾರೆ.

<><*<><>*><>

ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಸಿಬಿಐ ಸುಪ್ರೀಂಕೋರ್ಟ್ ಮೆಟ್ಟಿಲೇರಿದೆ. ಸಿಬಿಐ ತನಿಖೆಗೆ ನೀಡಿದ್ದ ಆದೇಶ ವಾಪಸ್ ಪಡೆದ ಕರ್ನಾಟಕ ಸರ್ಕಾರದ ನಿರ್ಧಾರವನ್ನು ಪ್ರಶ್ನಿಸಿ ಸಿಬಿಐ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ. ಈ ಕುರಿತಂತೆ ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿರುವ ಡಿ.ಕೆ.ಶಿವಕುಮಾರ್ ನ್ಯಾಯದ ಮೇಲೆ ತಮಗೆ ನಂಬಿಕೆ ಇದೆ ಎಂದು ತಿಳಿಸಿದ್ದಾರೆ. ಇದರ ಹಿಂದೆ ರಾಜಕೀಯ ದುರುದ್ದೇಶವಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಸಂಸದ ಕೋಟಾ ಶ್ರೀನಿವಾಸ್ ಪೂಜಾರಿ ರಾಜೀನಾಮೆಯಿಂದ ತೆರವಾಗಿರುವ ವಿಧಾನಪರಿಷತ್ ಉಪ ಚುನಾವಣೆಯ ಮತದಾನ ದಕ್ಷಿಣಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ನಡೆಯುತ್ತಿದೆ. ವಿಧಾನ ಸಭಾ ಸ್ಪೀಕರ್ ಯು.ಟಿ. ಖಾದರ್, ಉಳ್ಳಾಲ ನಗರಸಭೆಯಲ್ಲಿ ಹಾಗೂ ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ಮಂಗಳೂರು ಮಹಾನಗರ ಪಾಲಿಕೆಯ ಮತದಾನ ಕೇಂದ್ರದಲ್ಲಿ ಹಕ್ಕು ಚಲಾಯಿಸಿದರು. ಒಟ್ಟು ೩೯೨ ಮತಗಟ್ಟೆಗಳಲ್ಲಿ ೬ ಸಾವಿರದ ೩೨ ಮತದಾರರಿದ್ದು, ಈ ಪೈಕಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೩ ಸಾವಿರದ ೫೫೨ ಹಾಗೂ ಉಡುಪಿ ಜಿಲ್ಲೆಯಲ್ಲಿ ೨ ಸಾವಿರದ ೮೦ ಮತದಾರರಿದ್ದಾರೆ. ೫೩ ಸೂಕ್ಷ್ಮ ಮತಗಟ್ಟೆಗಳನ್ನು ಗುರುತಿಸಲಾಗಿದೆ. ಬಿಜೆಪಿಯಿಂದ ಕಿಶೋರ್ ಕುಮಾರ್ ಪುತ್ತೂರು, ಕಾಂಗ್ರೆಸ್‌ನಿಂದ ರಾಜು ಪೂಜಾರಿ, ಎಸ್‌ಡಿಪಿಐನಿಂದ ಅನ್ವರ್ ಸಾದತ್ ಮತ್ತು ಸ್ವತಂತ್ರ ಅಭ್ಯರ್ಥಿಯಾಗಿ ದಿನಕರ್ ಉಳ್ಳಾಲ್ ಕಣದಲ್ಲಿದ್ದಾರೆ.

<><*<><>*><>

ರಾಜ್ಯದ ಹಲವೆಡೆ ಮಳೆ ಮುಂದುವರೆದಿದೆ. ಬೆಂಗಳೂರು ನಗರದಲ್ಲಿ ಕಳೆದ ರಾತ್ರಿ ಸುರಿದ ಧಾರಾಕಾರ ಮಳೆಗೆ ಜನಜೀವನ ಅಸ್ತವ್ಯಸ್ತಗೊಂಡಿದೆ. ಹಲವೆಡೆ ರಸ್ತೆಗಳಲ್ಲಿ ನೀರು ನಿಂತಿದ್ದು, ವಾಹನ ಸವಾರರು ಪರದಾಡುವಂತಾಗಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಬೆಂಗಳೂರು ನಗರ ಜಿಲ್ಲೆಯ ಶಾಲೆಗಳಿಗೆ ರಜೆ ಘೋಷಿಸಲಾಗಿದೆ. ಹಾವೇರಿ ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಮಳೆ ಸುರಿಯುತ್ತಿದೆ. ತುಂಗಭದ್ರಾ, ವರದಾ ಹಾಗೂ ಕುಮದ್ವತಿ ನದಿಗಳು ಅಪಾಯ ಮಟ್ಟದಲ್ಲಿ ಹರಿಯುತ್ತಿವೆ. ಮಳೆಯಿಂದ ೨೫೦ ಕ್ಕೂ ಅಧಿಕ ಮನೆಗಳಿಗೆ ಹಾನಿಯಾಗಿದೆ. ಇಂದು ಮುಂಜಾನೆ ಸುರಿದ ಮಳೆಯಿಂದ ಹಲವು ಗ್ರಾಮಗಳಿಗೆ ನೀರು ನುಗ್ಗಿದೆ. ಮಳೆಯಿಂದ ಅನೇಕ ಕೆರೆಗಳು ಕೊಡಿ ಬಿದ್ದಿದ್ದು, ಕೆರೆಯ ನೀರು ಜಮೀನುಗಳಿಗೆ ನುಗ್ಗಿದ ಪರಿಣಾಮ ಕಟಾವಿಗೆ ಬಂದಿದ್ದ ಮೆಕ್ಕೆಜೋಳ, ಹತ್ತಿ, ಶೇಂಗಾ, ಸೋಯಾಬಿನ್ ಸೇರಿದಂತೆ ಬೆಳೆ ಹಾನಿಯಾದ ಪ್ರದೇಶಗಳಿಗೆ ಇಂದು ಸಂಸದ ಬಸವರಾಜ ಬೊಮ್ಮಾಯಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಮಾತನಾಡಿದ ಅವರು, ರಾಜ್ಯ ಸರ್ಕಾರಕ್ಕೆ ಬೆಳೆ ಹಾನಿ ಪರಿಹಾರ ನೀಡಲು ಮನವಿ ಮಾಡುವುದಾಗಿ ತಿಳಿಸಿದ್ದಾರೆ.

ಕಳೆದ ೧ ವಾರದಿಂದ ದಾವಣಗೆರೆ ಜಿಲ್ಲಾದ್ಯಂತ ಎಡೆಬಿಡದೇ ಸುರಿಯುತ್ತಿರುವ ಮಳೆಯಿಂದಾಗಿ ೩೮ ಮನೆಗಳಿಗೆ ಹಾನಿಯಾಗಿದ್ದು, ೩೨ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಹಾನಿಯಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ದಾವಣಗೆರೆ ತಾಲೂಕಿನ ದೇವರಹಟ್ಟಿ ಮತ್ತು ಬೂಸನಹಟ್ಟಿಗಲ್ಲಿ ೩೦ ಎಕರೆ ಪ್ರದೇಶದಲ್ಲಿ ಭತ್ತದ ಬೆಳೆ ಮತ್ತು ಕೊಯ್ಲಿಗೆ ಬಂದಿದ್ದ ಮೆಕ್ಕೇಜೋಳದ ಬೆಳೆ ಹಾನಿಯಾಗಿದೆ. ಕಳೆದ ರಾತ್ರಿಯಿಂದ ಮತ್ತೆ ಧಾರಾಕಾರ ಮಳೆಯಾಗುತ್ತಿದ್ದು, ದಾವಣಗೆರೆ ನಗರದ ತಗ್ಗುಪ್ರದೇಶಗಳ ಮನೆಗಳಿಗೆ ನೀರು ನುಗ್ಗಿದೆ. ಬಯಲುಸೀಮೆ ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಭಾರೀ ಮಳೆಯಿಂದಾಗಿ ತಾಲ್ಲೂಕಿನ ಶ್ರೀನಿವಾಸಸಾಗರ ಕೆರೆ ಕೋಡಿ ಹರಿಯುತ್ತಿದೆ. ಯಾವುದೇ ಕಾರಣಕ್ಕೂ ಕೆರೆಯ ನೀರಿಗೆ ಇಳಿಯದಂತೆ ಪ್ರವಾಸಿಗರಿಗೆ ಪೊಲೀಸ್ ಇಲಾಖೆ ಎಚ್ಚರಿಕೆ ನೀಡಿದೆ.

<><*<><>*><>

ತೆಂಕುತಿಟ್ಟು ಯಕ್ಷಗಾನದ ಪ್ರಸಿದ್ಧ ಹಾಸ್ಯ ಕಲಾವಿದ ಬಂಟ್ವಾಳ ಜಯರಾಮ ಆಚಾರ್ಯ, ಇಂದು ಮುಂಜಾನೆ ನಿಧನ ಹೊಂದಿದ್ದಾರೆ. ಅವರಿಗೆ ೬೭ ವರ್ಷ ವಯಸ್ಸಾಗಿತ್ತು. ಜಯರಾಮ ಆಚಾರ್ಯ, ಕಳೆದ ೫೦ ವರ್ಷಗಳಿಂದ ಯಕ್ಷಗಾನದ ಪಾತ್ರಗಳಿಗೆ ಹಾಸ್ಯದ ಸ್ಪರ್ಶ ನೀಡಿ ಸಾವಿರಾರು ಸನ್ನಿವೇಶಗಳನ್ನು ರಂಜನೀಯವನ್ನಾಗಿಸಿ ಯಕ್ಷ ಪ್ರೇಕ್ಷಕರ ಮನಗೆದ್ದಿದ್ದಾರೆ. ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ, ಯಕ್ಷಗಾನ ಅಕಾಡೆಮಿ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿ ಗೌರವಗಳಿಗೆ ಭಾಜನರಾಗಿದ್ದರು. ಅವರ ನಿಧನಕ್ಕೆ ನಾಡಿನ ಹಲವು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>